<u>ಕರ್ನಾಟಕ ವಿಧಾನ ಪರಿಷತ್ತು</u>

ಮಾನ್ಯ ಸದಸ್ಯರ ಹೆಸರು	:	ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**346**
ಉತ್ತರಿಸಬೇಕಾದ ದಿನಾಂಕ	:	03.02.2021
ಉತ್ತರಿಸಬೇಕಾದ ಸಚಿವರು	:	ವಸತಿ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದ ವಿವಿಧ ಜಿಲ್ಲೆಗಳಿಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆಗಳ ನಿರ್ಮಾಣಕ್ಕಾಗಿ ಪ್ರಸ್ತುತ ನೀಡುತ್ತಿರುವ ಹಣವೆಷ್ಟು; (ವಿವರಗಳನ್ನು ನೀಡುವುದು)	ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆಗಳ ನಿರ್ಮಾಣಕ್ಕಾಗಿ ಪ್ರಸ್ತುತ ನೀಡುತ್ತಿರುವ ಸಹಾಯಧನದ ವಿವರ ಈ ಕೆಳಕಂಡಂತಿದೆ.

(ರೂ.ಲಕ್ಷಗಳಲ್ಲಿ)

ಯೋಜನೆ	ಗ್ರಾಮೀಣ				ನಗರ			
	ಕೇಂದ್ರದ ಪಾಲು		ರಾಜ್ಯದ ಪಾಲು		ಕೇಂದ್ರದ ಪಾಲು		ರಾಜ್ಯದ ಪಾಲು	
	ಸಾ / ಅ.ಸಂ	ಪ.ಜಾ / ಪ.ಪಂ	ಸಾ/ ಅ.ಸಂ	ಪ.ಜಾ / ಪ.ಪಂ	ಸಾ / ಅ.ಸಂ	ಪ.ಜಾ / ಪ.ಪಂ	ಸಾ / ಅ.ಸಂ	ಪ.ಜಾ / ಪ.ಪಂ
ಬಸವ ವಸತಿ ಯೋಜನೆ	-	-	1.20	-	-	-	-	-
ಡಾ.ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆ	-	-	-	1.75	-	-	-	2.00
ವಾಜಪೇಯಿ ನಗರ ವಸತಿ ಯೋಜನೆ	-	-	-	-	-	-	1.20	-
ಡಿ.ದೇವರಾಜು ಅರಸು ವಸತಿ ಯೋಜನೆ	-	-	1.20	1.5	-	-	1.20	1.50
ಪ್ರಧಾನ ಮಂತ್ರಿ ಆವಾಸ್ ಯೋಜನೆ ಗ್ರಾಮೀಣ	0.72	0.72	0.48	0.78	-	-	-	-
ಪ್ರಧಾನ ಮಂತ್ರಿ ಆವಾಸ್ ಯೋಜನೆ ನಗರ	-	-	-	-	1.50	1.50	-	-

ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ನಗರ ಯೋಜನೆಯನ್ನು ರಾಜ್ಯ ಸರ್ಕಾರದ ಯೋಜನೆಗಳಾದ ವಾಜಪೇಯಿ ನಗರ ವಸತಿ ಯೋಜನೆ ಮತ್ತು ಡಾ.ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆಯೊಂದಿಗೆ ಸಮನ್ವಯಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದ್ದು, ಡಾ.ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆಯಡಿ ಪ.ಜಾ ಮತ್ತು ಪ.ಪಂಗಡ ಫಲಾನುಭವಿಗಳಿಗೆ ರೂ.2.00ಲಕ್ಷ ಹಾಗೂ ವಾಜಪೇಯಿ ನಗರ ವಸತಿ ಯೋಜನೆಯಡಿ ಸಾಮಾನ್ಯ ಮತ್ತು ಅಲ್ಪಸಂಖ್ಯಾತ ವರ್ಗದ ಫಲಾನುಭವಿಗಳಿಗೆ ರೂ.1.20 ಲಕ್ಷ ನೀಡಲಾಗುತ್ತಿದೆ.

(ಆ)	ಸರ್ಕಾರ ಪ್ರಸ್ತುತ ನೀಡುತ್ತಿರುವ ಹಣದಲ್ಲಿ ಮನೆಗಳ ನಿರ್ಮಾಣ ಸಾಧ್ಯವಾಗದೇ ಫಲಾನುಭವಿಗಳು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;	ಈ ಬಗ್ಗೆ ಪರಿಶೀಲಿಸಲಾಗುತ್ತಿದೆ.
(ಇ)	ಹಾಗಿದ್ದಲ್ಲಿ, ಪ್ರಸ್ತುತ ನೀಡುತ್ತಿರುವ ಹಣವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು ; ಮತ್ತು ಯಾವಾಗಿನಿಂದ ಜಾರಿಗೆ ತರಲಾಗುವುದು ?	

ಸಂಖ್ಯೆ :ವಇ 54 ಹೆಚ್‌ಎಎಂ 2021

(ವಿ. ಸೋಮಣ್ಣ)
ವಸತಿ ಸಚಿವರು